ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:      ದಿನಾಂಕ : DATE : 23/12/20

# ಆಕ್ಷೇಪಣೆ ಸಲ್ಲಿಕೆಗೆ ಜ.5ರ ಗಡುವು

**ಬೆಂಗಳೂರು:** ಕರ್ನಾಟಕ ಭೂಸುಧಾರಣೆ ಕಾಯ್ದೆಗೆ ತಿದ್ದುಪಡಿ ತಂದು ಹೊರಡಿಸಿರುವ ಸುಗ್ರೀವಾಜ್ಞೆ ಪ್ರಶ್ನಿಸಿರುವ ಅರ್ಜಿಗೆ ಆಕ್ಷೇಪಣೆ ಸಲ್ಲಿಸಲು ಸರ್ಕಾರಕ್ಕೆ ಜ.5ರವರೆಗೆ ಗಡುವು ನೀಡಿರುವ ಹೈಕೋರ್ಟ್, ಸುಗ್ರೀವಾಜ್ಞೆ ಆಧರಿಸಿ ಕೈಗೊಳ್ಳುವ ಎಲ್ಲ ಕ್ರಮಗಳೂ ನ್ಯಾಯಾಲಯ ನೀಡುವ ಅಂತಿಮ ಆದೇಶಕ್ಕೆ ಒಳಪಡಲಿದೆ ಎಂದಿದೆ. ಹಾಗೆ, ಈ ಹಿಂದೆ ನೀಡಿದ್ದ ಮಧ್ಯಂತರ ಆದೇಶವನ್ನು ಮುಂದುವರಿಸಿದೆ. ಬಾಗಲಕೋಟೆ ಜಿಲ್ಲೆಯ ಇಳಕಲ್ ಮೂಲದ ಸಾಮಾಜಿಕ ಹೋರಾಟಗಾರ ನಾಗರಾಜ ಶೇಷಪ್ಪ ಹೊಂಗಲ್, ಬೆಂಗಳೂರಿನ ವಕೀಲೆ ಗೀತಾ ಮಿಶ್ರಾ ಮತ್ತಿತರರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳ ವಿಚಾರಣೆ ಮುಖ್ಯ ನ್ಯಾಯಮೂರ್ತಿ ಎ.ಎಸ್.ಓಕ್ ನೇತೃತ್ವದ ವಿಭಾಗೀಯ ಪೀಠದಲ್ಲಿ ಮಂಗಳವಾರ ನಡೆಸಿತು. ಅರ್ಜಿಯಲ್ಲಿ ಗಂಭೀರವಾದ ವಿಚಾರ ಪ್ರಸ್ತಾಪಿಸಲಾಗಿದ್ದು, ತಿದ್ದುಪಡಿ ಕಾಯ್ದೆಯ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸಲಾಗಿದೆ. ಆದ್ದರಿಂದ ಸರ್ಕಾರಕ್ಕೆ ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ ನೀಡಬೇಕಾಗುತ್ತದೆ. ಅವಕಾಶ ನೀಡದೆ ಏಕಾಏಕಿ ಮಧ್ಯಂತರ ಆದೇಶದ ಬಗ್ಗೆ ವಿಚಾರಣೆ ನಡೆಸಲು ಸಾಧ್ಯವಿಲ್ಲ ಎಂದು ಹೇಳಿತು. ಮತ್ತೆ ಕಾಲಾವಕಾಶ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿದ ಪೀಠ, ವಿಚಾರಣೆಯನ್ನು ಜ.6ಕ್ಕೆ ಮುಂದೂಡಿತು.

» **ಭೂಸುಧಾರಣೆ ಕಾಯ್ದೆ ತಿದ್ದುಪಡಿ ಪ್ರಶ್ನಿಸಿದ ಪಿಐಎಲ್**

[redacted] ಕೊಹಿ